# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 420 (527) |
| ಸದಸ್ಯರ ಹೆಸರು | ಶ್ರೀ ಗೋವಿಂದರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 20.02.2023. |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ,ವಿಜ್ಞಾನ ಮತ್ತುತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ,ಜೀವನೋಪಾಯ ಹಾಗೂ ಉದ್ಯಮಶೀಲತೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪಿ.ಹೆಚ್.ಡಿ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಉಚಿತವಾಗಿ ಲ್ಯಾಪ್‌ಟಾಪ್ ಹಂಚಿಕೆ ಮಾಡುವ ಯೋಜನೆ ಸರ್ಕಾರದಲ್ಲಿದೆಯೇ: | ಪ್ರಸ್ತುತ ಸಾಲಿನಲ್ಲಿ ಉನ್ನತ ಶಿಕ್ಷಣ ಇಲಾಖಾ ಆಯವ್ಯಯದಿಂದ ಪಿಹೆಚ್‌ಡಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್ ಹಂಚಿಕೆ ಮಾಡಲು ಆಯವ್ಯಯ ನಿಗಧಿಪಡಿಸಿರುವುದಿಲ್ಲ. |
| (ಆ) | ಹಾಗಿದ್ದಲ್ಲಿ. ಇದು ಯಾವಾಗ ಪ್ರಾರಂಭವಾಗಿದೆ. ಇದುವರೆಗೂ ಎಷ್ಟು ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಹಂಚಿಕೆ ಮಾಡಲಾಗಿದೆ ಹಾಗೂ ಲ್ಯಾಪ್‌ಟಾಪ್ ಖರೀದಿಗೆ ಸರ್ಕಾರ ಯಾವ ಸಂಸ್ಥೆಗೆ ವಹಿಸಲಾಗಿದೆ: | ಹಿಂದಿನ ಸಾಲುಗಳಲ್ಲಿ ಆಯ್ದ ವಿಶ್ವವಿದ್ಯಾಲಯಗಳಿಗೆ ಪಿಹೆಚ್‌ಡಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್ ವಿತರಿಸಲು ಎಸ್‌ಸಿಪಿ/ಟಿಎಸ್‌ಪಿ ಅಡಿಯಲ್ಲಿ ಹಂಚಿಕೆಯಾಗಿರುವ ಅನುದಾನಕ್ಕೆ ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತು ಅನುಮೋದಿಸಿದ ಕ್ರಿಯಾಯೋಜನೆಯಂತೆ ಕ್ರಮವಹಿಸಲು ಸೂಚಿಸಲಾಗಿದೆ. 2021-22ನೇ ಸಾಲಿನ ಅನುಮೋದಿತ ಕ್ರಿಯಾಯೋಜನೆಯಲ್ಲಿ ಅನುದಾನ ಹಂಚಿಕೆ ಮಾಡದೇ ಇರುವ ವಿಶ್ವವಿದ್ಯಾಲಯಗಳಲ್ಲಿ ಸದರಿ ವಿಶ್ವವಿದ್ಯಾಲಯಗಳ ಹಣದಿಂದ ಪ.ಜಾತಿ/ಪ.ಪಂಗಡದ ವಿದ್ಯಾರ್ಥಿಗಳಿಗೆ ಸೌಲಭ್ಯ ಕಲ್ಪಿಸಲು ತಿಳಿಸಲಾಗಿದೆ. ಸರ್ಕಾರವು ಲ್ಯಾಪ್ ಟಾಪ್ ಖರೀದಿಗೆ ಯಾವುದೇ ಸಂಸ್ಥೆಯನ್ನು ನಿಗಧಿಪಡಿಸಿರುವುದಿಲ್ಲ. ವಿಶ್ವವಿದ್ಯಾಲಯಗಳ ಹಂತದಲ್ಲಿ ನಿಯಮಾನುಸಾರ ಕ್ರಮವಹಿಸಲು ತಿಳಿಸಲಾಗಿದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಇ) | ಈ ಯೋಜನೆಯಡಿಯಲ್ಲಿ ಸರ್ಕಾರದಿಂದ ಎಷ್ಟು ಅನುದಾನವನ್ನು ನಿಗಧಿಪಡಿಸಲಾಗಿದೆ. ಇದರಲ್ಲಿ ಎಷ್ಟು ಅನುದಾನ ಬಿಡುಗಡೆಗೊಂಡಿದೆ; | ಪ್ರಸ್ತುತ ಸಾಲಿನಲ್ಲಿ ಉನ್ನತ ಶಿಕ್ಷಣ ಇಲಾಖಾ ಆಯವ್ಯದಲ್ಲಿ ಈ ಯೋಜನೆಗೆ ಅನುದಾನವನ್ನು ನಿಗಧಿಪಡಿಸಿರುವುದಿಲ್ಲ. |
| (ಈ) | ಲ್ಯಾಪ್‌ಟಾಪ್‌ಗಳ ವಿತರಣೆಯನ್ನು ನಿಗಧಿತ ಸಮಯಕ್ಕೆ ವಿದ್ಯಾರ್ಥಿಗಳಿಗೆ ನೀಡದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ವಿಳಂಬವಾಗಲು ಯಾರು ಕಾರಣ, ಅಂತಹವರ ವಿರುದ್ಧ ಕ್ರಮಕೈಗೊಳ್ಳಲಾಗುವುದೇ; | ಪ್ರಸ್ತುತ ಸಾಲಿನಲ್ಲಿ ಉನ್ನತ ಶಿಕ್ಷಣ ಇಲಾಖೆ ಆಯವ್ಯಯದಲ್ಲಿ ಈ ಉದ್ದೇಶಕ್ಕಾಗಿ ಯಾವುದೇ ಅನುದಾನವನ್ನು ನಿಗಧಿಪಡಿಸಿಲ್ಲವಾದ್ದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ. |
| (ಉ) | ಲ್ಯಾಪ್‌ಟಾಪ್ ವಿತರಣೆ ಮಾಡಲು ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲು ಸರ್ಕಾರ ನಿಗಧಿಪಡಿಸಿರುವ ಮಾನದಂಡವೇನು ಹಾಗೂ ಯಾವ ಯಾವ ವರ್ಗದ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ? | |

ಸಂಖ್ಯೆ: ಇಡಿ 24 ಹೆಚ್‌ಪಿಯು 2023)

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಜೀವನೋಪಾಯ
ಹಾಗೂ ಉದ್ಯಮಶೀಲತೆ ಸಚಿವರು.